ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ರಾಜ್ಯಸಭಾ -

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE: 7-12-19.

# ಕನ್ನಡದಲ್ಲಿ ರಾಮಮೂರ್ತಿ ಪ್ರಮಾಣ ಸ್ವೀಕಾರ

**ನವದೆಹಲಿ:** ಕರ್ನಾಟಕದಿಂದ ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾದ ಕೆ.ಸಿ. ರಾಮಮೂರ್ತಿ ಶುಕ್ರವಾರ ಸಂಸತ್‌ನ ಮೇಲ್ಮನೆಯಲ್ಲಿ ಕನ್ನಡದಲ್ಲಿ ಪ್ರಮಾಣ ವಚನ ಸ್ವೀಕರಿಸಿದರು.



ಕಾಂಗ್ರೆಸ್ ರಾಜ್ಯಸಭಾ ಸದಸ್ಯರಾಗಿದ್ದ ಅವರು ಇತ್ತೀಚೆಗೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ಬಿಜೆಪಿಗೆ ಸೇರ್ಪಡೆಯಾಗಿದ್ದರು. ಅವರ ಅವಧಿ 2022ರ ಜೂನ್‌ಗೆ ಅಂತ್ಯವಾಗುತ್ತಿತ್ತು. ಅವಧಿಗೂ ಮುನ್ನವೇ ಕಳೆದ ಅಕ್ಟೋಬರ್ 16 ರಂದು ರಾಜ್ಯಸಭಾ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ತೆರವಾಗಿದ್ದ ರಾಜ್ಯಸಭೆ ಸ್ಥಾನಕ್ಕೆ ಕಾಂಗ್ರೆಸ್ ಹಾಗೂ ಜೆಡಿಎಸ್‌ನಿಂದ ಅಭ್ಯರ್ಥಿಯನ್ನು ಕಣಕ್ಕಿಳಿಸಿರಲಿಲ್ಲ. ಹೀಗಾಗಿ ಅವರು ಗುರುವಾರವಷ್ಟೇ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಕರ್ನಾಟಕದಲ್ಲಿ ಐಜಿಪಿ ಆಗಿ ಕಾರ್ಯನಿರ್ವಹಿಸಿದ್ದರು.